# ಕನ್ನಡ ವಿಶ್ವವಿದ್ಯಾಲಯ, ಹಂಪಿ

ಕರ್ನಾಟಕ ಸರ್ಕಾರ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ,
ರಾಷ್ಟ್ರೀಯ ಸೇವಾ ಯೋಜನಾ ಕೋಶ, ಬೆಂಗಳೂರು
ಕನ್ನಡ ವಿಶ್ವವಿದ್ಯಾಲಯ, ಹಂಪಿ, ರಾಷ್ಟ್ರೀಯ ಸೇವಾ ಯೋಜನಾ ಕೋಶ
ಹಾಗೂ ಕರ್ನಾಟಕ ಜಾನಪದ ವಿಶ್ವವಿದ್ಯಾಲಯ, ಗೊಟಗೋಡಿ

**ಡಾ.ಬಿ.ಆರ್. ಅಂಬೇಡ್ಕರ್ ಪ್ರಚಾರ ಅಭಿಯಾನ**

**'ಸಂವಿಧಾನ ಓದು' ಕಾರ್ಯಾಗಾರ** ಕಾರ್ಯಕ್ರಮ–12.4.2023

## ಸಂವಿಧಾನ ನಮ್ಮೆಲ್ಲರ ರಕ್ಷಾ ಕವಚವಿದ್ದಂತೆ : ಪ್ರೊ ಟಿ ಎಂ ಭಾಸ್ಕರ್

ನಾವೆಲ್ಲರೂ ಅನಾತ್ಮಕ ಕಾಲದಲ್ಲಿ ಜೀವನ ನಡೆಸುತ್ತಿದ್ದೇವೆ. ಪ್ರಸ್ತುತ ದಿನಗಳಲ್ಲಿ ಸಂವಿಧಾನದ ಸ್ಥಿತಿಗತಿ ಅರಿತುಕೊಳ್ಳಬೇಕಿದೆ. ಪ್ರಜ್ಞಾವಂತ ಸಮಾಜದಲ್ಲಿ ಸಾಮಾಜಿಕ ಪಿಡುಗುಗಳು ಇನ್ನೂ ಜೀವಂತವಾಗಿದ್ದು. ಜಾತಿವಾದ, ಧರ್ಮವಾದ, ಕೋಮುಗಲಭೆಗಳು ಸಮಾಜದಲ್ಲಿ ಶಾಂತಿ ಕದಡುತ್ತಿವೆ. ಇನ್ನಾದರೂ ಜನಸಾಮಾನ್ಯರು ಪ್ರಜ್ಞಾವಂತರಾಗಬೇಕಾಗಿದೆ. ಸಂವಿಧಾನವನ್ನು ಕೇವಲ ಜಾರಿಗೆ ತಂದರೆ ಸಾಲದು, ಅದನ್ನು ಪಾಲನೆ ಮಾಡಬೇಕು. ಆಗ ಮಾತ್ರ ಸಂವಿಧಾನದ ಮೂಲ ಆಶಯ ಸಹಕಾರಗೊಳ್ಳುತ್ತದೆ ಎಂದು ಕರ್ನಾಟಕ ಜಾನಪದ ವಿಶ್ವವಿದ್ಯಾಲಯದ ಮಾನ್ಯ ಕುಲಪತಿಗಳಾದ **ಪ್ರೊ ಟಿ. ಎಂ. ಭಾಸ್ಕರ್‌ರವರು** ಅಭಿಪ್ರಾಯಪಟ್ಟರು.




ಸಂವಿಧಾನದ ಪ್ರಸ್ತಾವನೆಯ ಪ್ರತಿಜ್ಞಾವಿಧಿ ಸ್ವೀಕಾರ

**ಕರ್ನಾಟಕ ಸರ್ಕಾರದ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ರಾಷ್ಟ್ರೀಯ ಸೇವಾ ಯೋಜನಾ ಕೋಶ, ಬೆಂಗಳೂರು, ಕನ್ನಡ ವಿಶ್ವವಿದ್ಯಾಲಯ, ಹಂಪಿ, ರಾಷ್ಟ್ರೀಯ ಸೇವಾ ಯೋಜನಾ ಕೋಶ ಹಾಗೂ ಕರ್ನಾಟಕ ಜಾನಪದ ವಿಶ್ವವಿದ್ಯಾಲಯ, ಗೊಟಗೋಡಿ** ಇವರ ಸಂಯುಕ್ತಾಶ್ರಯದಲ್ಲಿ ದಿನಾಂಕ **12.4.2023**ರಂದು **ಮಂಟಪ ಸಭಾಂಗಣ**ದಲ್ಲಿ ನಡೆದ **ಡಾ.ಬಿ.ಆರ್. ಅಂಬೇಡ್ಕರ್ ಪ್ರಚಾರ ಅಭಿಯಾನ 'ಸಂವಿಧಾನ ಓದು' ಕಾರ್ಯಾಗಾರ**ದಲ್ಲಿ ದೀಪ ಬೆಳಗಿಸುವುದರ ಮೂಲಕ ಉದ್ಘಾಟಿಸಿ ಅವರು ಮಾತನಾಡಿದರು.

ಅವರು ಸ್ಪರ್ಧಾತ್ಮಕ ಜಗತ್ತಿನ ಇಂದಿನ ಯುಗದಲ್ಲಿ ಭಾರತದ ಸ್ಥಿತಿಗತಿಯ ವಿಚಾರದಲ್ಲಿ ಏನಾದರೂ ಬದಲಾಗಿದೆಯೇ? 75ನೇ ವರ್ಷದ ಅಮೃತಮಹೋತ್ಸವ ಸಂದರ್ಭದಲ್ಲಿಯೂ ನಮ್ಮ ಊರುಗಳಲ್ಲಿ ಇನ್ನೂ ಪಂಚಮರಿಗೆ ಎಂದೇ ಪ್ರತ್ಯೇಕ ನೀರಿನ ಮೂಲಗಳು ಅಸ್ತಿತ್ವದಲ್ಲಿವೆ. ಉನ್ನತ ವರ್ಗದವರು ತಳ ಸಮುದಾಯಗಳನ್ನು ಕೀಳಾಗಿ ಕಾಣುತ್ತಿದ್ದಾರೆ. ಇನ್ನೂ ಸಮಾಜದಲ್ಲಿ ಶ್ರೇಣಿ ವ್ಯವಸ್ಥೆಯು ತಾಂಡವವಾಡುತ್ತಿದೆ. ಸ್ವಾತಂತ್ರ್ಯ ಪೂರ್ವದಲ್ಲಿ ಅವೈಜ್ಞಾನಿಕ ಆಚರಣೆಗಳು ಜನಸಾಮಾನ್ಯರನ್ನು ಸಾಮಾಜಿಕ ಕಟ್ಟುಪಾಡುಗಳಿಂದ ಬಂಧಿಸಿದ್ದವು. ಆದರೆ ಬಾಬಾ ಸಾಹೇಬ್ ಅಂಬೇಡ್ಕರ್ ಅವರು

ಸಂವಿಧಾನದ ಮೂಲಕ ಜನಸಾಮಾನ್ಯರನ್ನು ಸಾಮಾಜಿಕ ಕಟ್ಟುಪಾಡುಗಳಿಂದ ವಿಮೂಕ್ತಿಗೊಳಿಸಿ ಜನರನ್ನು ಸ್ವತಂತ್ರವಾಗಿ ಜೀವಿಸಲು ಅವಕಾಶ ಕಲ್ಪಿಸಿದ್ದಾರೆ ಎಂದು ಹೇಳಿದರು. ಪ್ರಮುಖವಾಗಿ ಪ್ರಸ್ತುತ ದಿನಗಳಲ್ಲಿ ಜಾತಿ ಧರ್ಮಗಳು ಜನರ ದಿಕ್ಕನ್ನು ತಪ್ಪಿಸುತ್ತಿದ್ದು ಇದು ಬದಲಾಗಬೇಕಿದೆ. ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಪ್ರಜೆಗಳೇ ಪ್ರಭುಗಳು. ಪವಿತ್ರವಾದ ಸಂವಿಧಾನದ ಮೂಲ ಆಶಯ ಸಮ ಸಮಾಜದ ನಿರ್ಮಾಣದ ದೂರ ದೃಷ್ಟಿಕೋನ ಹೊಂದಿದೆ. ಆದರೆ ಕೆಲ ಜನರು ಸಂವಿಧಾನವನ್ನು ತಿರಿಚುವ ಕೆಲಸವನ್ನು ಮಾಡುತ್ತಿದ್ದಾರೆ. ಇಂತಹ ಮನಸ್ಸುಗಳು ಬದಲಾಗಬೇಕು. ಪ್ರತಿಯೊಬ್ಬ ಜನಸಾಮಾನ್ಯರು ಸಂವಿಧಾನವನ್ನು ಸರಿಯಾದ ಕ್ರಮದಲ್ಲಿ ಓದಿ ಅರ್ಥೈಸಿಕೊಂಡು ಸರಿಯಾಗಿ ಪಾಲನೆ ಮಾಡಿದಾಗ ಸಂವಿಧಾನದ ಮಹತ್ವ ಹಾಗೂ ಡಾ. ಬಿ.ಆರ್.ಅಂಬೇಡ್ಕರ್ ಅವರ ದೃಷ್ಟಿಕೋನ ಅರ್ಥವಾಗುತ್ತದೆ ಎಂದು ತಿಳಿಸಿದರು. ಇದೇ ಸಂದರ್ಭದಲ್ಲಿ ಯಾವುದೇ ಆಸೆ ಆಕಾಂಕ್ಷೆಗಳಿಗೆ ಬಲಿಯಾಗದೆ ಅಂಬೇಡ್ಕರ್ ಅವರು ನೀಡಿದ ಮತದಾನದ ಹಕ್ಕನ್ನು ಮನಸ್ಸು ಶುದ್ಧವಾಗಿ ಇಟ್ಟುಕೊಂಡು ಆತ್ಮ ಸಾಕ್ಷಿಯಾಗಿ ನಿಮ್ಮ ನಾಯಕರನ್ನು ಆಯ್ಕೆ ಮಾಡಿಕೊಂಡಾಗ ಮಾತ್ರ ಉತ್ತಮ ಸಮಾಜ ನಿರ್ಮಾಣವಾಗುತ್ತದೆ ಎಂದು ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು.



ಡಾ.ಬಿ.ಆರ್. ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಮಾನ್ಯ ಕುಲಪತಿಯವರು ಹಾಗೂ ಗಣ್ಯರು ಪುಷ್ಪ ಅರ್ಪಿಸಿದರು.

ಸಂಪನ್ಮೂಲ ವ್ಯಕ್ತಿಯಾಗಿ ಆಗಮಿಸಿದ ವಿಶ್ರಾಂತ ಪ್ರಾಚಾರ್ಯರು ಹಾಗೂ ರಾಜಕೀಯ ಚಿಂತಕರಾದ **ಪ್ರೊ. ಸಿ ಶರಣಪ್ಪ ಅವರು** ಮಾತನಾಡುತ್ತ ಇಂದಿನ ಯುವಕರು ಅಂಬೇಡ್ಕರ್ ಅವರ ಧ್ಯೇಯ ವಾಕ್ಯಗಳಾದ ಶಿಕ್ಷಣ, ಸಂಘಟನೆ, ಹೋರಾಟ ಎಂಬ ಮಂತ್ರಗಳಲ್ಲಿ ಶಿಕ್ಷಣವನ್ನು ಪಡೆಯದೇ ಕೇವಲ ಸಂಘಟನೆ ಮತ್ತು ಹೋರಾಟದಲ್ಲಿ ತೊಡಗಿಸಿಕೊಂಡಿರುವುದು ದುರಂತದ ಸಂಗತಿಯಾಗಿದೆ. ಸರ್ಕಾರದ ಪ್ರಮುಖ ಕರ್ತವ್ಯ ಸೌಲಭ್ಯಗಳ ಜೊತೆಗೆ ಸೌಹಾರ್ಧತೆಯ ಸಂಸ್ಕೃತಿಯನ್ನು ಹಂಚಬೇಕಾಗಿದೆ. ಸಮಾಜದಲ್ಲಿ ಇಂದು ಜನಸಾಮಾನ್ಯರು ಭ್ರಷ್ಟರಾಗುತ್ತಿದ್ದಾರೆ, ಅಭಿವೃದ್ಧಿ ಕೆಲಸಗಳನ್ನು ಕೇಳುವ ಬದಲು ನಮಗೆ ಎಷ್ಟು ಕೊಡುತ್ತಿರಾ ಎಂದು ಕೇಳುತ್ತಿದ್ದಾರೆ. ಡಾ. ಬಿ.ಆರ್.ಅಂಬೇಡ್ಕರ್ ಅವರು ಪ್ರಜಾಪ್ರಭುತ್ವದ ವ್ಯವಸ್ಥೆಯಲ್ಲಿ ದೂರ ದೃಷ್ಠಿಕೋನದ ಕಲ್ಪನೆಯ ಮೂಲಕ ಸಂವಿಧಾನವನ್ನು ರಚಿಸಿ ಜನಸಾಮಾನ್ಯರಿಗೆ ಮೂಲಭೂತ ಹಕ್ಕಗಳು ಹಾಗೂ ಕರ್ತವ್ಯಗಳನ್ನು ನೀಡಿದ್ದಾರೆ. ಆದರೆ ಇಂದು ಜನರು ಸಂವಿಧಾನದ ಮೂಲ ಉದ್ದೇಶವನ್ನು ಮರೆತು ತಮ್ಮ ಮತವನ್ನು ಮಾರಿಕೊಳ್ಳುತ್ತಿದ್ದು ಇದು ವಿಪರ್ಯಾಸವೇ ಸರಿ! ಇಂದು ಸಂವಿಧಾನ ಅಪಾಯಕಾರಿ ಸ್ಥಿತಿಯಲ್ಲಿದೆ. ಇದನ್ನು ಜನಸಾಮಾನ್ಯರು ಸೂಕ್ಷ್ಮವಾಗಿ ಗಮನಿಸಬೇಕಿದೆ. ದಲಿತ ಬಲಿತ ಎನ್ನುವುದಕ್ಕಿಂತ ವ್ಯವಸ್ಥೆಯನ್ನು ತಿಳಿದುಕೊಂಡು ಸರಿಯಾದ ದಾರಿಯಲ್ಲಿ ಬದುಕಬೇಕಿದೆ.

ಕನ್ನಡ ವಿಶ್ವವಿದ್ಯಾಲಯದ ಮಾನ್ಯ ಕುಲಪತಿಗಳಾದ **ಡಾ. ಡಿ.ವಿ. ಪರಮಶಿವಮೂರ್ತಿ ಅವರು** ಅಧ್ಯಕ್ಷತೆ ವಹಿಸಿ ಮಾತನಾಡುತ್ತ ದೇಶದ ಮಹಾಗ್ರಂಥಗಳಾದ ರಾಮಾಯಣ, ಮಹಾಭಾರತಗಳಿಗೆ ಸಮನಾಗಿ ಭಾರತ ಸಂವಿಧಾನವು ದೇಶದ ಗ್ರಂಥವಾಗಿದೆ. ಡಾ. ಬಿ.ಆರ್ ಅಂಬೇಡ್ಕರ್ ಅವರು ಸಂವಿಧಾನ ರಚಿಸಲು ಅಂದಿನ ಪರಿಸ್ಥಿತಿಯನ್ನು ಗಮನದಲ್ಲಿ ಇಟ್ಟುಕೊಂಡು ಎಲ್ಲಾ ಸಮುದಾಯಗಳ ಅಭಿವೃದ್ಧಿ ಹಾಗೂ  ಹಿತದೃಷ್ಟಿಯನ್ನು ಕಾಪಾಡಲು ಅಂಬೇಡ್ಕರ್ ಅವರು ಅನೇಕ ಸವಾಲು ಸಮಸ್ಯೆಗಳನ್ನು ಎದುರಿಸಿ ಸಂವಿಧಾನವನ್ನು ರಚಿಸಿದ್ದಾರೆ. ಪ್ರಪಂಚದಲ್ಲಿಯೇ ಅತೀ ಹೆಚ್ಚು ಮಾನವಿಯ

ಮೌಲ್ಯಗಳನ್ನು ಹೊಂದಿರುವ ಬೃಹತ್ ಸಂವಿಧಾನವಾಗಿದ್ದು ಈ ಕಾರಣಕ್ಕಾಗಿಯೇ ಪ್ರಪಂಚದ ವಿಶ್ವಮಾನ್ಯತೆ ಪಡೆದುಕೊಂಡಿದೆ, ಇದು ಭಾರತೀಯರ ಹೆಮ್ಮೆ ಎಂದು ಅಭಿಪ್ರಾಯಪಟ್ಟರು.

ಈ ಕಾರ್ಯಕ್ರಮದಲ್ಲಿ ಕರ್ನಾಟಕ ಜಾನಪದ ವಿಶ್ವವಿದ್ಯಾಲಯದ ಕುಲಸಚಿವರಾದ **ಪ್ರೊ. ಸಿ.ಟಿ. ಗುರುಪ್ರಸಾದ್,** ಕನ್ನಡ ವಿಶ್ವವಿದ್ಯಾಲಯದ ಕುಲಸಚಿವರಾದ **ಪ್ರೊ. ಸುಬ್ಬಣ್ಣ ರೈ,** ಕನ್ನಡ ವಿಶ್ವವಿದ್ಯಾಲಯದ **ವಿವಿಧ ನೀಕಾಯಗಳ ಡೀನರು, ವಿವಿಧ ವಿಭಾಗಗಳ ಮುಖ್ಯಸ್ಥರು, ಪ್ರಾಧ್ಯಾಪಕರು, ಬೋಧಕ–ಬೋಧಕೇತರ ಸಿಬ್ಬಂದಿ, ಹಾಗೂ ವಿದ್ಯಾರ್ಥಿಗಳು** ಉಪಸ್ಥಿತರಿದ್ದರು. ಕನ್ನಡ ವಿಶ್ವವಿದ್ಯಾಲಯದ ರಾಷ್ಟ್ರೀಯ ಸೇವಾ ಯೋಜನಾ ಕೋಶದ ಸಂಯೋಜನಾಧಿಕಾರಿಯಾದ **ಡಾ. ಅಮರೇಶ ಯತಗಲ್ ಅವರು** ಗಣ್ಯರನ್ನು ಸ್ವಾಗತಿಸಿ ಪರಿಚಯಿಸಿದರು, ಕರ್ನಾಟಕ ಜಾನಪದ ವಿಶ್ವವಿದ್ಯಾಲಯದ ರಾಷ್ಟ್ರೀಯ ಸೇವಾ ಯೋಜನಾ ಕೋಶದ ಸಂಯೋಜನಾಧಿಕಾರಿಯಾದ **ಡಾ. ಮಲ್ಲಿಕಾರ್ಜುನ ಬಿ ಮಾನ್ಪಡೆ ಅವರು** ಪ್ರಾಸ್ತಾವಿಕವಾಗಿ ಮಾತನಾಡಿದರು, ಡಾ.ಸಂತೋಷ ಅವರು ಕಾರ್ಯಕ್ರಮವನ್ನು ನಿರೂಪಿಸಿದರು. ಸಂಶೋಧನ ವಿದ್ಯಾರ್ಥಿಯಾದ ವೀರೇಶ್ ವಂದಿಸಿದರು. ಸಂಗೀತ ವಿಭಾಗದ ವಿದ್ಯಾರ್ಥಿಗಳು ಪ್ರಾರ್ಥನೆಯನ್ನು ನೆರವೇರಿಸಿದರು.






ಪ್ರೊ. ಟಿ.ಎಂ. ಭಾಸ್ಕರ್ ಅವರಿಂದ ಕಾರ್ಯಾಗಾರದ ಉದ್ಘಾಟನೆ ಮತ್ತು ಉದ್ಘಾಟನಾ ಭಾಷಣ




ಪ್ರೊ. ಸಿ. ಶರಣಪ್ಪ ಅವರು ಉಪನ್ಯಾಸ ನೀಡಿದರು




ಅಧ್ಯಕ್ಷತೆ ವಹಿಸಿ ಮಾತನಾಡುತ್ತಿರುವ ಮಾನ್ಯ ಕುಲಪತಿಯವರಾದ ಡಾ.ಡಿ.ವಿ.ಪರಮಶಿವಮೂರ್ತಿ ಅವರು



ಶುಕ್ರವಾರ • ಏಪ್ರಿಲ್ 14, 2023 ಪ್ರಜಾವಾಣಿ

### ಜಾನಪದ ವಿಶ್ವವಿದ್ಯಾಲಯದ ಕುಲಪತಿ ಪ್ರೊ ಭಾಸ್ಕರ್

# ಸಂವಿಧಾನ ತಿರುಚುವ ಮನಸ್ಸುಗಳು ಬದಲಾಗಲಿ

ಪ್ರಜಾವಾಣಿ ವಾರ್ತೆ

**ಹೊಸಪೇಟೆ (ವಿಜಯನಗರ):** 'ಕೆಲವರು ಸಂವಿಧಾನವನ್ನು ತಿರುಚುವ ಕೆಲಸ ಮಾಡುತ್ತಿದ್ದಾರೆ. ಇಂತಹ ಮನಸ್ಸುಗಳು ಬದಲಾಗಬೇಕು' ಎಂದು ಕರ್ನಾಟಕ ಜಾನಪದ ವಿಶ್ವವಿದ್ಯಾಲಯದ ಕುಲಪತಿ ಪ್ರೊ ಟಿ.ಎಂ. ಭಾಸ್ಕರ್ ತಿಳಿಸಿದರು.

ಇಲ್ಲಿನ ಹಂಪಿ ಕನ್ನಡ ವಿಶ್ವವಿದ್ಯಾಲಯದಲ್ಲಿ ಬುಧವಾರ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ರಾಷ್ಟ್ರೀಯ ಸೇವಾ ಯೋಜನಾ ಕೋಶ ಬೆಂಗಳೂರು, ಕನ್ನಡ ವಿಶ್ವವಿದ್ಯಾಲಯ ಹಂಪಿ, ರಾಷ್ಟ್ರೀಯ ಸೇವಾ ಯೋಜನಾ ಕೋಶ ಹಾಗೂ ಕರ್ನಾಟಕ ಜಾನಪದ ವಿಶ್ವವಿದ್ಯಾಲಯ ಗೊಟಗೋಡಿ ಸಹಭಾಗಿತ್ವದಲ್ಲಿ ಏರ್ಪಡಿಸಿದ್ದ ಡಾ.ಬಿ. ಆರ್. ಅಂಬೇಡ್ಕರ್ ಪ್ರಚಾರ ಅಭಿಯಾನ 'ಸಂವಿಧಾನ ಓದು' ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿದರು.

ಪ್ರತಿಯೊಬ್ಬರೂ ಸಂವಿಧಾನವನ್ನು ಸರಿಯಾದ ಕ್ರಮದಲ್ಲಿ ಓದಿ ಅರ್ಥೈಸಿಕೊಂಡರೆ ಸಂವಿಧಾನದ ಮಹತ್ವ ಹಾಗೂ ಡಾ. ಬಿ.ಆರ್. ಅಂಬೇಡ್ಕರ್ ಅವರ ದೃಷ್ಟಿಕೋನ ಅರ್ಥವಾಗುತ್ತದೆ. ಯಾವುದೇ ಆಸೆ ಆಕಾಂಕ್ಷೆಗಳಿಗೆ ಬಲಿಯಾಗದೆ ಅಂಬೇಡ್ಕರ್ ಅವರು ನೀಡಿದ ಮತದಾನದ ಹಕ್ಕನ್ನು ಆತ್ಮ ಸಾಕ್ಷಿಗೆ ತಕ್ಕಂತೆ ಚಲಾಯಿಸಿ ನಾಯಕರನ್ನು ಆಯ್ಕೆ ಮಾಡಿಕೊಂಡಾಗ ಉತ್ತಮ ಸಮಾಜ ನಿರ್ಮಾಣವಾಗುತ್ತದೆ ಎಂದರು.

ರಾಜಕೀಯ ಚಿಂತಕ ಪ್ರೊ. ಸಿ. ಶರಣಪ್ಪ ಮಾತನಾಡಿ, ಇಂದಿನ ಯುವಕರು ಅಂಬೇಡ್ಕರ್ ಕೊಟ್ಟಿರುವ ಶಿಕ್ಷಣ, ಸಂಘಟನೆ, ಹೋರಾಟ ಎಂಬ ಮಂತ್ರಗಳಲ್ಲಿ ಶಿಕ್ಷಣ ಪಡೆಯುವುದು ಮರೆತಿದ್ದಾರೆ. ಸಂಘಟನೆ, ಹೋರಾಟಕ್ಕೆ ಸೀಮಿತವಾಗಿದ್ದಾರೆ ಎಂದು ಹೇಳಿದರು.

ಕನ್ನಡ ವಿಶ್ವವಿದ್ಯಾಲಯದ ಕುಲಪತಿ ಪ್ರೊ. ಡಿ.ವಿ. ಪರಮಶಿವಮೂರ್ತಿ ಮಾತನಾಡಿ, ದೇಶದ ಮಹಾಗ್ರಂಥಗಳಾದ ರಾಮಾಯಣ, ಮಹಾಭಾರತಗಳಿಗೆ ಸಮನಾಗಿ ಭಾರತ ಸಂವಿಧಾನವು ದೇಶದ ಗ್ರಂಥವಾಗಿದೆ. ಡಾ. ಬಿ.ಆರ್ ಅಂಬೇಡ್ಕರ್ ಅವರು ಸಂವಿಧಾನ ರಚಿಸಲು ಅಂದಿನ ಪರಿಸ್ಥಿತಿಯನ್ನು ಗಮನದಲ್ಲಿ ಇಟ್ಟುಕೊಂಡು ಎಲ್ಲ ಸಮುದಾಯಗಳ ಅಭಿವೃದ್ಧಿ ಹಾಗೂ ಹಿತದೃಷ್ಟಿಯನ್ನು ಕಾಪಾಡಲು ಸಂವಿಧಾನವನ್ನು ರಚಿಸಿದ್ದಾರೆ. ಪ್ರಪಂಚದಲ್ಲಿಯೇ ಅತಿ ಹೆಚ್ಚು ಮಾನವೀಯ ಮೌಲ್ಯಗಳನ್ನು ಹೊಂದಿರುವ ಬೃಹತ್ ಸಂವಿಧಾನ ಇದಾಗಿದೆ ಎಂದು ಹೇಳಿದರು.

ಜಾನಪದ ವಿಶ್ವವಿದ್ಯಾಲಯದ ಕುಲಸಚಿವ ಪ್ರೊ. ಸಿ.ಟಿ. ಗುರುಪ್ರಸಾದ್, ಕನ್ನಡ ವಿಶ್ವವಿದ್ಯಾಲಯದ ಕುಲಸಚಿವ ಪ್ರೊ. ಎ. ಸುಬ್ಬಣ್ಣ ರೈ, ರಾಷ್ಟ್ರೀಯ ಸೇವಾ ಯೋಜನಾ ಕೋಶದ ಸಂಯೋಜನಾಧಿಕಾರಿ ಅಮರೇಶ ಯತಗಲ್, ಜಾನಪದ ವಿ.ವಿ. ಯೋಜನಾ ಕೋಶದ ಸಂಯೋಜನಾಧಿಕಾರಿ ಮಲ್ಲಿಕಾರ್ಜುನ ಬಿ. ಮಾನ್ವಡೆ, ಸಂಶೋಧನಾ ವಿದ್ಯಾರ್ಥಿಗಳಾದ ಸಂತೋಷ ಹಾಜರಿದ್ದರು.

ಹಂಪಿ ಕನ್ನಡ ವಿಶ್ವವಿದ್ಯಾಲಯದಲ್ಲಿ ಬುಧವಾರ ಏರ್ಪಡಿಸಿದ್ದ ಕಾರ್ಯಕ್ರಮದಲ್ಲಿ ಗಣ್ಯರು ಸಂವಿಧಾನ ಓದಿ ಪ್ರತಿಜ್ಞೆ ಸ್ವೀಕರಿಸಿದರು

## ಕರ್ನಾಟಕ ಜಾನಪದ ವಿಶ್ವವಿದ್ಯಾಲಯದ ಕುಲಪತಿ ಪ್ರೊ.ಟಿ.ಎಂ.ಭಾಸ್ಕರ್ ಅಭಿಪ್ರಾಯ

# ಸಂವಿಧಾನ ಎಲ್ಲರಿಗೂ ರಕ್ಷಾ ಕವಚ

■ ವಿಜಯವಾಣಿ ಸುದ್ದಿಜಾಲ ಹೊಸಪೇಟೆ

ಆಧುನಿಕ ಭಾರತದ ನಾಗರಿಕರಿಗೆ ಸಂವಿಧಾನ ರಕ್ಷಾ ಕವಚವಿದ್ದಂತೆ ಎಂದು ಕರ್ನಾಟಕ ಜಾನಪದ ವಿಶ್ವವಿದ್ಯಾಲಯದ ಕುಲಪತಿ ಪ್ರೊ.ಟಿ.ಎಂ.ಭಾಸ್ಕರ್ ಅಭಿಪ್ರಾಯಪಟ್ಟರು.

» **ಡಾ.ಬಿ.ಆರ್. ಅಂಬೇಡ್ಕರ್ ಪ್ರಚಾರ ಅಭಿಯಾನ 'ಸಂವಿಧಾನ ಓದು' ಕಾರ್ಯಾಗಾರ**

ಕರ್ನಾಟಕ ಸರ್ಕಾರದ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ರಾಷ್ಟ್ರೀಯ ಸೇವಾ ಯೋಜನಾ ಕೋಶ, ಬೆಂಗಳೂರು, ಕನ್ನಡ ವಿಶ್ವವಿದ್ಯಾಲಯದ ರಾಷ್ಟ್ರೀಯ ಸೇವಾ ಯೋಜನಾ ಕೋಶ ಹಾಗೂ ಕರ್ನಾಟಕ ಜಾನಪದ ವಿಶ್ವವಿದ್ಯಾಲಯ, ಗೊಟಗೋಡಿ ಸಂಯುಕ್ತಾಶ್ರಯದಲ್ಲಿ ಕನ್ನಡ ವಿಶ್ವವಿದ್ಯಾಲಯದ ಮಂಟಪ ಸಭಾಂಗಣದಲ್ಲಿ ಆಯೋಜಿಸಿದ್ದ ಡಾ.ಬಿ.ಆರ್. ಅಂಬೇಡ್ಕರ್ ಪ್ರಚಾರ ಅಭಿಯಾನ 'ಸಂವಿಧಾನ ಓದು' ಕಾರ್ಯಾಗಾರವನ್ನು ಉದ್ಘಾಟಿಸಿ ಮಾತನಾಡಿದರು.

ಸ್ವಾತಂತ್ರ್ಯ ಪೂರ್ವದಲ್ಲಿ ಅವೈಜ್ಞಾನಿಕ ಆಚರಣೆಗಳು ಜನಸಾಮಾನ್ಯರನ್ನು ಸಾಮಾಜಿಕ ಕಟ್ಟುಪಾಡುಗಳಿಂದ ಬಂಧಿಸಿದ್ದವು. ಆದರೆ, ಬಾಬಾ ಸಾಹೇಬ್ ಅಂಬೇಡ್ಕರ್ ಅವರು ಸಂವಿಧಾನದ ಮೂಲಕ ಜನಸಾಮಾನ್ಯರನ್ನು ಸಾಮಾಜಿಕ ಕಟ್ಟಳೆಗಳಿಂದ ವಿಮುಕ್ತಗೊಳಿಸಿ ಎಲ್ಲರಿಗೂ ಸಮಾನವಾಗಿ ಬದುಕುವ ಹಕ್ಕು ಕಲ್ಪಿಸಿದರು ಎಂದರು.

ಸ್ಪರ್ಧಾತ್ಮಕ ಜಗತ್ತಿನ ಇಂದಿನ ಯುಗದಲ್ಲಿ ಭಾರತದ ಸ್ಥಿತಿಗತಿಯ ವಿಚಾರದಲ್ಲಿ ಏನಾದರೂ ಬದಲಾಗಿದೆಯೇ? ಭಾರತ ಸ್ವಾತಂತ್ರ್ಯದ ಅಮೃತಮಹೋತ್ಸವ ಸಂದರ್ಭದಲ್ಲಿಯೂ ನಮ್ಮ ಊರುಗಳಲ್ಲಿ ಪಂಚಮರಿಗೆ ಎಂದೇ ಪ್ರತ್ಯೇಕ ನೀರಿನ ಮೂಲಗಳು ಅಸ್ತಿತ್ವದಲ್ಲಿವೆ. ಉನ್ನತ ವರ್ಗದವರು ತಳ ಸಮುದಾಯಗಳನ್ನು ಕೀಳಾಗಿ ಕಾಣುತ್ತಿದ್ದಾರೆ. ಸಮಾಜದಲ್ಲಿ ಶ್ರೇಣಿ ವ್ಯವಸ್ಥೆ ಇನ್ನೂ ಜೀವಂತವಾಗಿದೆ. ಜಾತಿ, ಧರ್ಮ ಹೆಸರಲ್ಲಿ ಸೃಷ್ಟಿಯಾಗುವ ಕೋಮುಗಲಭೆಗಳು ಸಮಾಜದಲ್ಲಿ ಶಾಂತಿ ಕದಡುತ್ತಿವೆ ಎಂದು ವಿಷಾದ ವ್ಯಕ್ತಪಡಿಸಿದರು.



ಹೊಸಪೇಟೆ ತಾಲೂಕಿನ ಕಮಲಾಪುರ ಸಮೀಪದ ಕನ್ನಡ ವಿಶ್ವವಿದ್ಯಾಲಯದಲ್ಲಿ ಆಯೋಜಿಸಿದ್ದ ಡಾ.ಬಿ.ಆರ್. ಅಂಬೇಡ್ಕರ್ ಪ್ರಚಾರ ಅಭಿಯಾನ 'ಸಂವಿಧಾನ ಓದು' ಕಾರ್ಯಾಗಾರವನ್ನು ಕರ್ನಾಟಕ ಜಾನಪದ ವಿಶ್ವವಿದ್ಯಾಲಯದ ಕುಲಪತಿ ಪ್ರೊ.ಟಿ.ಎಂ.ಭಾಸ್ಕರ್ ಉದ್ಘಾಟಿಸಿದರು. ಕರ್ನಾಟಕ ಜಾನಪದ ವಿಶ್ವವಿದ್ಯಾಲಯದ ಕುಲಸಚಿವ ಪ್ರೊ.ಸಿ.ಟಿ.ಗುರುಪ್ರಸಾದ್, ಕನ್ನಡ ವಿಶ್ವವಿದ್ಯಾಲಯದ ಕುಲಸಚಿವ ಪ್ರೊ. ಸುಬ್ಬಣ್ಣ ರೈ, ಕನ್ನಡ ಮತ್ತು ಕನ್ನಡ ವಿಶ್ವವಿದ್ಯಾಲಯಗಳ ಎನ್‌ಎಸ್‌ಎಸ್ ಸಂಯೋಜನಾಧಿಕಾರಿಗಳಾದ ಡಾ.ಅಮರೇಶ ಯತಗಲ್, ಡಾ. ಮಲ್ಲಿಕಾರ್ಜುನ ಬಿ. ಮಾನ್ವಡೆ ಇದ್ದರು.

ಜಾತಿ ಧರ್ಮಗಳು ಹೆಸರಲ್ಲಿ ದಿಕ್ಕು ತಪ್ಪಿಸುತ್ತಿರುವ ಬಗ್ಗೆ ಜನರ ಎಚ್ಚೆತ್ತುಕೊಳ್ಳಬೇಕು. ಪವಿತ್ರವಾದ ಸಂವಿಧಾನದ ಮೂಲ ಆಶಯ ಸಮ ಸಮಾಜದ ನಿರ್ಮಾಣದ [illegible] ದೃಷ್ಟಿಕೋನ ಹೊಂದಿದೆ. ಆದರೆ ಕೆಲ ಜನರು ಸಂವಿಧಾನವನ್ನು ತಿರಿಚುವ ಕೆಲಸವನ್ನು ಮಾಡುತ್ತಿದ್ದಾರೆ. ಇಂತಹ ಮನಸ್ಸುಗಳು ಬದಲಾಗಬೇಕು. ಎಲ್ಲರೂ ಸಂವಿಧಾನವನ್ನು ಸರಿಯಾದ ಕ್ರಮದಲ್ಲಿ ಓದಿ ಅರ್ಥೈಸಿಕೊಂಡು, ಪಾಲನೆ ಮಾಡಿದಾಗ ಅದರ ಆಶಯ ಈಡೇರುತ್ತದೆ ಎಂದು ಹೇಳಿದರು.

ನಿವೃತ್ತ ಪ್ರಾಚಾರ್ಯರು ಪ್ರೊ.ಸಿ.ಶರಣಪ್ಪ ಮಾತನಾಡಿ, ಇಂದಿನ ಯುವಕರು ಅಂಬೇಡ್ಕರ್ ಅವರ ಧ್ಯೇಯ ವಾಕ್ಯಗಳಾದ ಶಿಕ್ಷಣ, ಸಂಘಟ[illegible] ಹೋರಾಟ

> ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಪ್ರಜೆಗಳೇ ಪ್ರಭುಗಳು. ಚುನಾವಣಾ ಸಂದರ್ಭದಲ್ಲಿ ಯಾವುದೇ ಆಸೆ, ಆಮಿಷಗಳಿಗೆ ಬಲಿಯಾಗದೆ ಸಂವಿಧಾನದಡಿ ನೀಡಿರುವ ಮತ ಹಕ್ಕನ್ನು ಶುದ್ಧ ಹಸ್ತದಿಂದ ದಾನ ಮಾಡಬೇಕು. ಆತ್ಮ ಸಾಕ್ಷಿಯಾಗಿ ನಿಮ್ಮ ನಾಯಕರನ್ನು ಆಯ್ಕೆ ಮಾಡಿಕೊಂಡಾಗ ಮಾತ್ರ ಉತ್ತಮ ಸಮಾಜ ನಿರ್ಮಾಣವಾಗುತ್ತದೆ ಸಾಧ್ಯವಾಗುತ್ತದೆ.
>
> । ಪ್ರೊ.ಟಿ.ಎಂ.ಭಾಸ್ಕರ್
> ಕರ್ನಾಟಕ ಜಾನಪದ ವಿಶ್ವವಿದ್ಯಾಲಯದ ಕುಲಪತಿ

ಎಂಬುದನ್ನು ಮೂಲ ಮಂತ್ರವನ್ನಾಗಿಸಿಕೊಳ್ಳಬೇಕು. ಶಿಕ್ಷಣ ಪಡೆಯದೇ ಕೇವಲ ಸಂಘಟನೆ ಮತ್ತು ಹೋರಾಟದಲ್ಲಿ ತೊಡಗಿಸಿಕೊಂಡಿರುವುದು ದುರಂತದ ಸಂಗತಿ. ಜನಸಾಮಾನ್ಯರು ಭ್ರಷ್ಟರಾಗುತ್ತಿದ್ದಾರೆ. ಅಭಿವೃದ್ಧಿ ಕೆಲಸಗಳನ್ನು ಕೇಳುವ ಬದಲು ನಮಗೆ ಎಷ್ಟು ಕೊಡುತ್ತಿರಾ ಎಂದು ಬೇಡುವಷ್ಟು ಕೀಳು ಮಟ್ಟಕ್ಕೆ ಜಾರಿದ್ದಾರೆ. ಪ್ರಜಾಪ್ರಭುತ್ವದ ಉದ್ದೇಶ ಮತ್ತು ಮಹತ್ವಾಕಾಂಕ್ಷೆಯನ್ನು ಮರೆತು ಮತದಾನವನ್ನು ಮಾರಿಕೊಳ್ಳುತ್ತಿರುವುದು ದುರಂತ ಎಂದು ಆತಂಕ ವ್ಯಕ್ತಪಡಿಸಿದರು.

ಕನ್ನಡ ವಿಶ್ವವಿದ್ಯಾಲಯದ ಕುಲಪತಿ ಡಾ.ಡಿ.ವಿ.ಪರಮಶಿವಮೂರ್ತಿ ಅಧ್ಯಕ್ಷತೆ ವಹಿಸಿ ಮಾತನಾಡಿ, ದೇಶದ ಮಹಾಗ್ರಂಥಗಳಾದ ರಾಮಾಯಣ, ಮಹಾಭಾರತಗಳಷ್ಟೇ ಭಾರತೀಯ ಸಂವಿಧಾನವೂ ಮಹತ್ವಪೂರ್ಣವಾಗಿದೆ. ಅಂದಿನ ಪರಿಸ್ಥಿತಿಯನ್ನು ಗಮನದಲ್ಲಿ ಇಟ್ಟುಕೊಂಡು ಡಾ.ಬಿ.ಆರ್.ಅಂಬೇಡ್ಕರ್ ಅವರು ಸಂವಿಧಾನ ರಚಿಸಿದ್ದಾರೆ. ಪ್ರಪಂಚದಲ್ಲೇ ಅತೀ ಹೆಚ್ಚು ಮಾನವಿಯ ಮೌಲ್ಯಗಳನ್ನು ಹೊಂದಿರುವ ಬೃಹತ್ ಸಂವಿಧಾನವಾಗಿದೆ. ಈ ಕಾರಣಕ್ಕಾಗಿಯೇ ಪ್ರಪಂಚದ ವಿಶ್ವಮಾನ್ಯತೆ ಪಡೆದುಕೊಂಡಿದೆ, ಇದು ಭಾರತೀಯರ ಹೆಮ್ಮೆ ಎಂದು ಅಭಿಪ್ರಾಯಪಟ್ಟರು.

---

ಮಾಹಿತಿಕೇಂದ್ರ



## ಜಾನಪದ ವಿವಿ ಕುಲಪತಿ ಪ್ರೊ.ಟಿ.ಎಂ.ಭಾಸ್ಕರ್ ಹೇಳಿಕೆ

# ಸಂವಿಧಾನ ಪಾಲನೆ ಮಾಡಲು ಸಲಹೆ

■ ವಿಕ ಸುದ್ದಿಲೋಕ ವಿಜಯನಗರ (ಹೊಸಪೇಟೆ)

ಸಂವಿಧಾನ ಪಾಲನೆ ಮಾಡಿದರೆ ಮೂಲ ಆಶಯ ಸಹಕಾರಗೊಳ್ಳುತ್ತದೆ ಎಂದು ಕರ್ನಾಟಕ ಜಾನಪದ ವಿವಿಯ ಕುಲಪತಿ ಪ್ರೊ.ಟಿ.ಎಂ.ಭಾಸ್ಕರ್ ಹೇಳಿದರು.

ರಾಜ್ಯ ಸರಕಾರದ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ರಾಷ್ಟ್ರೀಯ ಸೇವಾ ಯೋಜನಾ ಕೋಶ, ರಾಜ್ಯ ಜಾನಪದ ವಿವಿಯ ಗೊಟಗೋಡಿ ಸಂಯುಕ್ತಾಶ್ರಯದಲ್ಲಿ ವಿವಿಯ ಮಂಟಪ ಸಭಾಂಗಣದಲ್ಲಿ ಬುಧವಾರ ಡಾ.ಬಿ.ಆರ್.ಅಂಬೇಡ್ಕರ್ ಪ್ರಚಾರ ಅಭಿಯಾನದ ಸಂವಿಧಾನ ಓದು ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿದರು. ಪ್ರಸ್ತುತ ದಿನಗಳಲ್ಲಿ ಸಂವಿಧಾನದ ಸ್ಥಿತಿಗತಿ ಅರಿತುಕೊಳ್ಳಬೇಕಿದೆ. ಪ್ರಜ್ಞಾವಂತ ಸಮಾಜದಲ್ಲಿ ಸಾಮಾಜಿಕ ಪಿಡುಗುಗಳು ಇನ್ನೂ ಜೀವಂತವಾಗಿದ್ದು ಜಾತಿವಾದ, ಧರ್ಮವಾದ, ಕೋಮುಗಲಭೆಗಳು ಸಮಾಜದಲ್ಲಿ ಶಾಂತಿ ಕದಡುತ್ತಿವೆ. ಇನ್ನಾದರೂ ಜನಸಾಮಾನ್ಯರು ಪ್ರಜ್ಞಾವಂತ ರಾಗಬೇಕಾಗಿದೆ ಎಂದರು.



ಹಂಪಿ ಕನ್ನಡ ವಿವಿಯ ಮಂಟಪ ಸಭಾಂಗಣದಲ್ಲಿ ಬುಧವಾರ ಡಾ.ಬಿ.ಆರ್.ಅಂಬೇಡ್ಕರ್ ಪ್ರಚಾರ ಅಭಿಯಾನದ ಸಂವಿಧಾನ ಓದು ಕಾರ್ಯಾಗಾರ ನಡೆಯಿತು.

ಪ್ರತಿಯೊಬ್ಬ ಜನಸಾಮಾನ್ಯರು ಸಂವಿಧಾನವನ್ನು ಸರಿಯಾದ ಕ್ರಮದಲ್ಲಿ ಓದಿ ಅರ್ಥೈಸಿಕೊಂಡು ಸರಿಯಾಗಿ ಪಾಲನೆ ಮಾಡಿದಾಗ ಸಂವಿಧಾನದ ಮಹತ್ವ ಹಾಗೂ ಡಾ. ಬಿ.ಆರ್.ಅಂಬೇಡ್ಕರ್ ಅವರ ದೃಷ್ಟಿಕೋನ ಅರ್ಥವಾಗುತ್ತದೆ ಎಂದರು.

ನಿವೃತ್ತ ಪ್ರಾಚಾರ್ಯ ಪ್ರೊ.ಸಿ.ಶರಣಪ್ಪ ಭಾಗವಹಿಸಿದ್ದರು.

ಹಂಪಿ ಕನ್ನಡ ವಿವಿ ಕುಲಪತಿ ಡಾ.ಡಿ.ವಿ.ಪರಮಶಿವಮೂರ್ತಿ ಅಧ್ಯಕ್ಷತೆ ವಹಿಸಿದ್ದರು.

ಜಾನಪದ ವಿವಿಯ ಕುಲಸಚಿವ ಪ್ರೊ.ಸಿ.ಟಿ.ಗುರುಪ್ರಸಾದ್, ಕನ್ನಡ ವಿವಿಯ ಕುಲಸಚಿವ ಪ್ರೊ.ಸುಬ್ಬಣ್ಣ ರೈ, ಎನ್‌ಎಸ್‌ಎಸ್ ಕೋಶದ ಸಂಯೋಜನಾಧಿಕಾರಿ ಡಾ. ಅಮರೇಶ ಯತಗಲ್, ಸಂಯೋಜನಾಧಿಕಾರಿ ಡಾ.ಮಲ್ಲಿಕಾರ್ಜುನ ಬಿ.ಮಾನ್ವಡೆ, ಡಾ. ಸಂತೋಷ ಇದ್ದರು.

ಮಾಹಿತಿಕೇಂದ್ರ

ಪ್ರಜಾವಾಣಿ
ವಿಜಯನಗರ
ಮಂಗಳವಾರ • ಏಪ್ರಿಲ್ 11, 2023

# 'ಸಂವಿಧಾನ ಓದು' ಕಾರ್ಯಾಗಾರ

**ಹೊಸಪೇಟೆ (ವಿಜಯನಗರ):** ಡಾ.ಬಿ. ಆರ್. ಅಂಬೇಡ್ಕರ್ ಪ್ರಚಾರ ಅಭಿಯಾನ 'ಸಂವಿಧಾನ ಓದು' ಕಾರ್ಯಾಗಾರ ಏ.12ರಂದು ಬೆಳಿಗ್ಗೆ 10.30ಕ್ಕೆ ಹಂಪಿ ಕನ್ನಡ ವಿಶ್ವವಿದ್ಯಾಲಯದ ಮಂಟಪ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ.

ಕರ್ನಾಟಕ ಜಾನಪದ ವಿಶ್ವವಿದ್ಯಾಲಯದ ಕುಲಪತಿ ಪ್ರೊ.ಟಿ.ಎಂ. ಭಾಸ್ಕರ್ ಉದ್ಘಾಟಿಸುವರು. ಕುಲಸಚಿವ ಪ್ರೊ.ಸಿ.ಟಿ. ಗುರುಪ್ರಸಾದ್ ಅತಿಥಿಗಳಾಗಿ ಪಾಲ್ಗೊಳ್ಳುವರು. 'ಭಾರತ ಸಂವಿಧಾನದ ಆಶಯಗಳು' ಕುರಿತು ರಾಜಕೀಯ ಚಿಂತಕ ಪ್ರೊ.ಸಿ. ಶರಣಪ್ಪ ಮಾತನಾಡುವರು. ಹಂಪಿ ಕನ್ನಡ ವಿಶ್ವವಿದ್ಯಾಲಯದ ಕುಲಪತಿ ಪ್ರೊ.ಡಿ.ವಿ. ಪರಮಶಿವಮೂರ್ತಿ ಅಧ್ಯಕ್ಷತೆ ವಹಿಸುವರು.

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ರಾಷ್ಟ್ರೀಯ ಸೇವಾ ಯೋಜನೆ ಕೋಶ, ಕನ್ನಡ ವಿಶ್ವವಿದ್ಯಾಲಯ ಹಾಗೂ ಜಾನಪದ ವಿಶ್ವವಿದ್ಯಾಲಯದ ಸಹಭಾಗಿತ್ವದಲ್ಲಿ ಆಯೋಜಿಸಲಾಗಿದೆ.

ಸಂಯುಕ್ತ ಕರ್ನಾಟಕ
ಶನಿವಾರ, 15, ಏಪ್ರಿಲ್, 2023
ಹುಬ್ಬಳ್ಳಿ | HUBBALLI
03

# ಸಂವಿಧಾನ ನಮ್ಮೆಲ್ಲರ ರಕ್ಷಾ ಕವಚ

**ಹೊಸಪೇಟೆ:** ಪ್ರಸ್ತುತ ದಿನಗಳಲ್ಲಿ ಸಂವಿಧಾನದ ಸ್ಥಿತಿಗತಿ ಅರಿತುಕೊಳ್ಳಬೇಕಿದೆ. ಪ್ರಜ್ಞಾವಂತ ಸಮಾಜದಲ್ಲಿ ಸಾಮಾಜಿಕ ಪಿಡುಗುಗಳು ಇನ್ನೂ ಜೀವಂತವಾಗಿದ್ದು. ಜಾತಿವಾದ, ಧರ್ಮವಾದ, ಕೋಮುಗಲಭೆಗಳು ಸಮಾಜದಲ್ಲಿ ಶಾಂತಿ ಕದಡುತ್ತಿವೆ. ಸಂವಿಧಾನವನ್ನು ಕೇವಲ ಜಾರಿಗೆ ತಂದರೆ ಸಾಲದು, ಪಾಲನೆ ಮಾಡಬೇಕು. ಆಗ ಮಾತ್ರ ಸಂವಿಧಾನದ ಮೂಲ ಆಶಯ ಸಹಕಾರಗೊಳ್ಳುತ್ತದೆ ಎಂದು ಹೇಳಿದರು. ಹಂಪಿ ಕನ್ನಡ ವಿವಿಯ ಮಂಟಪ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ಡಾ.ಬಿ.ಆರ್. ಅಂಬೇಡ್ಕರ್ ಪ್ರಚಾರ ಅಭಿಯಾನ 'ಸಂವಿಧಾನ ಓದು' ಕಾರ್ಯಾಗಾರ ಉದ್ದೇಶಿಸಿ ಮಾತನಾಡಿದರು. ಯಾವುದೇ ಆಸೆ ಆಕಾಂಕ್ಷೆಗಳಿಗೆ ಬಲಿಯಾಗದೆ ಅಂಬೇಡ್ಕರ್ ಅವರು ನೀಡಿದ ಮತದಾನದ ಹಕ್ಕನ್ನು ಮನಸ್ಸು ಶುದ್ಧವಾಗಿ ಇಟ್ಟುಕೊಂಡು ಆತ್ಮಸಾಕ್ಷಿಯಾಗಿ ನಿಮ್ಮ ನಾಯಕರನ್ನು ಆಯ್ಕೆ ಮಾಡಿಕೊಂಡಾಗ ಮಾತ್ರ ಉತ್ತಮ ಸಮಾಜ ನಿರ್ಮಾಣವಾಗುತ್ತದೆ ಎಂದು ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು. ವಿಶ್ರಾಂತ ಪ್ರಾಚಾರ್ಯ, ರಾಜಕೀಯ ಚಿಂತಕ ಪ್ರೊ. ಸಿ ಶರಣಪ್ಪ ಅವರು ಮಾತನಾಡಿದರು.

ಕನ್ನಡ ವಿಶ್ವವಿದ್ಯಾಲಯದ ಕುಲಪತಿ ಡಾ. ಡಿ.ವಿ. ಪರಮಶಿವಮೂರ್ತಿ ಮಾತನಾಡಿ, ಪ್ರಪಂಚದಲ್ಲಿಯೇ ಅತೀ ಹೆಚ್ಚು ಮಾನವಿಯ ಮೌಲ್ಯಗಳನ್ನು ಹೊಂದಿರುವ ಬೃಹತ್ ಸಂವಿಧಾನವಾಗಿದ್ದು ಈ ಕಾರಣಕ್ಕಾಗಿಯೇ ಪ್ರಪಂಚದ ವಿಶ್ವಮಾನ್ಯತೆ ಪಡೆದುಕೊಂಡಿದೆ, ಇದು ಭಾರತೀಯರ ಹೆಮ್ಮೆ ಎಂದರು.

ಕರ್ನಾಟಕ ಜಾನಪದ ವಿಶ್ವವಿದ್ಯಾಲಯದ ಕುಲಸಚಿವ ಪ್ರೊ. ಸಿ.ಟಿ. ಗುರುಪ್ರಸಾದ್, ಕನ್ನಡ ವಿಶ್ವವಿದ್ಯಾಲಯದ ಕುಲಸಚಿವ ಪ್ರೊ. ಸುಬ್ಬಣ್ಣ ರೈ, ವಿವಿಧ ನಿಕಾಯಗಳ ಡೀನರು, ವಿವಿಧ ವಿಭಾಗಗಳ ಮುಖ್ಯಸ್ಥರು, ಪ್ರಾಧ್ಯಾಪಕರು, ಬೋಧಕ-ಬೋಧಕೇತರ ಸಿಬ್ಬಂದಿ, ಹಾಗೂ ವಿದ್ಯಾರ್ಥಿಗಳು ಇದ್ದರು. ಡಾ. ಅಮರೇಶ ಯತಗಲ್ ಸ್ವಾಗತಿಸಿ ಪರಿಚಯಿಸಿದರು, ಡಾ. ಮಲ್ಲಿಕಾರ್ಜುನ ಬಿ ಮಾನ್ವಡೆ ಅವರು ಪ್ರಾಸ್ತಾವಿಕವಾಗಿ ಮಾತನಾಡಿದರು, ಡಾ.ಸಂತೋಷ ನಿರೂಪಿಸಿದರು. ಸಂಶೋಧನ ವಿದ್ಯಾರ್ಥಿ ವೀರೇಶ್ ವಂದಿಸಿದರು.



ಹಂಪಿ ಕನ್ನಡ ವಿವಿಯಲ್ಲಿ 'ಸಂವಿಧಾನ ಓದು' ಕಾರ್ಯಾಗಾರವನ್ನು ಕರ್ನಾಟಕ ಜಾನಪದ ವಿಶ್ವವಿದ್ಯಾಲಯದ ಕುಲಪತಿ ಪ್ರೊ ಟಿ. ಎಂ. ಭಾಸ್ಕರ್ ಉದ್ಘಾಟಿಸಿದರು.

ಉದಯವಾಣಿ
ಶುಕ್ರವಾರ, ಏಪ್ರಿಲ್ 14, 2023

ಜನಸಾಮಾನ್ಯರಲ್ಲಿ ಪ್ರಜ್ಞೆ ಜಾಗೃತವಾಗಲಿ | ಸಮ ಸಮಾಜ ನಿರ್ಮಾಣವೇ ಸಂವಿಧಾನದ ಆಶಯ

# ಸಂವಿಧಾನ ಪಾಲನೆ ಎಲ್ಲರ ಹೊಣೆ: ಪ್ರೊ|ಭಾಸ್ಕರ್

**ಹೊಸಪೇಟೆ:** ಸಂವಿಧಾನ ಪಾಲನೆಯಿಂದ ಮಾತ್ರ ಸಂವಿಧಾನದ ಮೂಲ ಆಶಯ ಸಹಕಾರಗೊಳ್ಳಲಿದೆ ಎಂದು ಕರ್ನಾಟಕ ಜಾನಪದ ವಿಶ್ವವಿದ್ಯಾಲಯದ ಕುಲಪತಿ ಪ್ರೊ| ಟಿ. ಎಂ.ಭಾಸ್ಕರ್ ಹೇಳಿದರು.

ಕನ್ನಡ ವಿಶ್ವವಿದ್ಯಾಲಯದಲ್ಲಿ ಡಾ|ಬಿ.ಆರ್. ಅಂಬೇಡ್ಕರ್ ಪ್ರಚಾರ ಅಭಿಯಾನ 'ಸಂವಿಧಾನ ಓದು'ಕಾರ್ಯಾಗಾರಕ್ಕೆ ಚಾಲನೆ ನೀಡಿ ಮಾತನಾಡಿ,ಪ್ರಸ್ತುತ ದಿನಗಳಲ್ಲಿ ಸಂವಿಧಾನದ ಸ್ಥಿತಿಗತಿ ಅರಿತುಕೊಳ್ಳಬೇಕಿದೆ. ಪ್ರಜ್ಞಾವಂತ ಸಮಾಜದಲ್ಲಿ ಸಾಮಾಜಿಕ ಪಿಡುಗುಗಳು ಇನ್ನೂ ಜೀವಂತವಾಗಿದ್ದು, ಜಾತಿವಾದ, ಧರ್ಮವಾದ, ಕೋಮುಗಲಭೆಗಳು ಸಮಾಜದಲ್ಲಿ ಶಾಂತಿ ಕದಡುತ್ತಿವೆ. ಇನ್ನಾದರೂ ಜನಸಾಮಾನ್ಯರು ಪ್ರಜ್ಞಾವಂತರಾಗಬೇಕಿದೆ ಎಂದರು.

75ನೇ ವರ್ಷದ ಸಂದರ್ಭದಲ್ಲಿಯೂ ಉನ್ನತ ವರ್ಗದವರು ತಳ ಸಮುದಾಯಗಳನ್ನು ಕೀಳಾಗಿ ಕಾಣುತ್ತಿದ್ದಾರೆ. ಇನ್ನೂ ಸಮಾಜದಲ್ಲಿ ಶ್ರೇಣಿ ವ್ಯವಸ್ಥೆಯು ತಾಂಡವವಾಡುತ್ತಿದೆ. ಸ್ವಾತಂತ್ರ್ಯ ಪೂರ್ವದಲ್ಲಿ ಅವೈಜ್ಞಾನಿಕ ಆಚರಣೆಗಳು ಜನಸಾಮಾನ್ಯರನ್ನು ಸಾಮಾಜಿಕ ಕಟ್ಟುಪಾಡುಗಳಿಂದ ಬಂಧಿಸಿದ್ದವು. ಆದರೆ ಬಾಬಾ ಸಾಹೇಬ್ ಅಂಬೇಡ್ಕರ್ ಅವರು ಸಂವಿಧಾನದ ಮೂಲಕ ಜನಸಾಮಾನ್ಯರನ್ನು ಸಾಮಾಜಿಕ ಕಟ್ಟುಪಾಡುಗಳಿಂದ ವಿಮುಕ್ತಿಗೊಳಿಸಿದ್ದರು ಎಂದು ಹೇಳಿದರು.

ಪ್ರಸ್ತುತ ದಿನಗಳಲ್ಲಿ ಜಾತಿ, ಧರ್ಮಗಳು ಜನರ ದಿಕ್ಕನ್ನು ತಪ್ಪಿಸುತ್ತಿದ್ದು ಇದು ಬದಲಾಗಬೇಕಿದೆ. ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಪ್ರಜೆಗಳೇ ಪ್ರಭುಗಳು. ಪವಿತ್ರವಾದ ಸಂವಿಧಾನದ ಮೂಲ ಆಶಯ ಸಮ ಸಮಾಜದ ನಿರ್ಮಾಣ. ಆದರೆ ಕೆಲ ಜನರು ಸಂವಿಧಾನವನ್ನು ತಿರುಚುವ ಕೆಲಸವನ್ನು ಮಾಡುತ್ತಿದ್ದಾರೆ. ಇಂತಹ ಮನಸ್ಸುಗಳು ಬದಲಾಗಬೇಕು. ಜನಸಾಮಾನ್ಯರು ಸಂವಿಧಾನವನ್ನು ಸರಿಯಾದ ಕ್ರಮದಲ್ಲಿ ಓದಿ ಅರ್ಥೈಸಿಕೊಂಡು ಸರಿಯಾಗಿ ಪಾಲನೆ ಮಾಡಿದಾಗ ಸಂವಿಧಾನದ ಮಹತ್ವ ಅರ್ಥವಾಗುತ್ತದೆ ಎಂದರು.



ಹೊಸಪೇಟೆ:ಡಾ|ಬಿ.ಆರ್. ಅಂಬೇಡ್ಕರ್ ಪ್ರಚಾರ ಅಭಿಯಾನ 'ಸಂವಿಧಾನ ಓದು' ಕಾರ್ಯಾಗಾರಕ್ಕೆ ಪ್ರೊ| ಟಿ. ಎಂ. ಭಾಸ್ಕರ್ ಚಾಲನೆ ನೀಡಿದರು.

ವಿಶ್ರಾಂತ ಪ್ರಾಚಾರ್ಯ ಪ್ರೊ| ಸಿ. ಶರಣಪ್ಪ ಮಾತನಾಡಿ, ಇಂದಿನ ಯುವಕರು ಅಂಬೇಡ್ಕರ್ ಅವರ ಧ್ಯೇಯ ವಾಕ್ಯಗಳಾದ ಶಿಕ್ಷಣ, ಸಂಘಟನೆ, ಹೋರಾಟ ಎಂಬ ಮಂತ್ರಗಳಲ್ಲಿ ಶಿಕ್ಷಣವನ್ನು ಪಡೆಯದೇ ಕೇವಲ ಸಂಘಟನೆ ಮತ್ತು ಹೋರಾಟದಲ್ಲಿ ತೊಡಗಿಸಿಕೊಂಡಿರುವುದು ದುರಂತದ ಸಂಗತಿಯಾಗಿದೆ ಎಂದು ವಿಷಾಸಿದರು.

ಡಾ| ಬಿ.ಆರ್.ಅಂಬೇಡ್ಕರ್ ಅವರು ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ದೂರ ದೃಷ್ಟಿಕೋನದ ಕಲ್ಪನೆಯ ಮೂಲಕ ಸಂವಿಧಾನವನ್ನು ರಚಿಸಿ ಜನಸಾಮಾನ್ಯರಿಗೆ ಮೂಲಭೂತ ಹಕ್ಕು ಹಾಗೂ ಕರ್ತವ್ಯಗಳನ್ನು ನೀಡಿದ್ದಾರೆ. ಇಂದು ಸಂವಿಧಾನ ಅಪಾಯಕಾರಿ ಸ್ಥಿತಿಯಲ್ಲಿದೆ. ಇದನ್ನು ಜನಸಾಮಾನ್ಯರು ಸೂಕ್ಷ್ಮವಾಗಿ ಗಮನಿಸಬೇಕಿದೆ ಎಂದರು.

ಕನ್ನಡ ವಿಶ್ವವಿದ್ಯಾಲಯದ ಕುಲಪತಿ ಡಾ| ಡಿ.ವಿ. ಪರಮಶಿವಮೂರ್ತಿ ಮಾತನಾಡಿ, ದೇಶದ ಮಹಾಗ್ರಂಥಗಳಾದರಾಮಾಯಣ,ಮಹಾಭಾರತಗಳಿಗೆ ಸಮನಾಗಿ ಭಾರತ ಸಂವಿಧಾನವು ದೇಶದ ಗ್ರಂಥವಾಗಿದೆ. ಡಾ| ಬಿ.ಆರ್.ಅಂಬೇಡ್ಕರ್ ಅವರು ಸಂವಿಧಾನ ರಚಿಸಲು ಅಂದಿನ ಪರಿಸ್ಥಿತಿಯನ್ನು ಗಮನದಲ್ಲಿ ಇಟ್ಟುಕೊಂಡು ಎಲ್ಲ ಸಮುದಾಯಗಳ ಅಭಿವೃದ್ಧಿ ಹಾಗೂ ಹಿತದೃಷ್ಟಿಯನ್ನು ಕಾಪಾಡಲು ಅಂಬೇಡ್ಕರ್ ಅವರು ಅನೇಕ ಸವಾಲು ಸಮಸ್ಯೆಗಳನ್ನು ಎದುರಿಸಿ ಸಂವಿಧಾನವನ್ನು ರಚಿಸಿದ್ದಾರೆ. ಪ್ರಪಂಚದಲ್ಲಿಯೇ ಅತಿ ಹೆಚ್ಚು ಮಾನವಿಯ ಮೌಲ್ಯಗಳನ್ನು ಹೊಂದಿರುವ ಬೃಹತ್ ಸಂವಿಧಾನವಾಗಿದ್ದು ಈ ಕಾರಣಕ್ಕಾಗಿಯೇ ಪ್ರಪಂಚದ ವಿಶ್ವಮಾನ್ಯತೆ ಪಡೆದುಕೊಂಡಿದೆ, ಇದು ಭಾರತೀಯರ ಹೆಮ್ಮೆ ಎಂದರು.

ಕರ್ನಾಟಕ ಜಾನಪದ ವಿಶ್ವವಿದ್ಯಾಲಯದ ಕುಲಸಚಿವ ಪ್ರೊ|. ಸಿ.ಟಿ. ಗುರುಪ್ರಸಾದ್, ಕನ್ನಡ ವಿಶ್ವವಿದ್ಯಾಲಯದ ಕುಲಸಚಿವ ಪ್ರೊ|. ಸುಬ್ಬಣ್ಣ ರೈ, ವಿವಿಧ ನಿಕಾಯಗಳ ಡೀನರು, ವಿವಿಧ ವಿಭಾಗಗಳ ಮುಖ್ಯಸ್ಥರು, ಪ್ರಾಧ್ಯಾಪಕರು, ಬೋಧಕ-ಬೋಧಕೇತರ ಸಿಬ್ಬಂದಿ, ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಕನ್ನಡ ವಿಶ್ವವಿದ್ಯಾಲಯದ ರಾಷ್ಟ್ರೀಯ ಸೇವಾ ಯೋಜನಾ ಕೋಶದ ಸಂಯೋಜನಾಧಿಕಾರಿ ಡಾ| ಅಮರೇಶ ಯತಗಲ್ ಸ್ವಾಗತಿಸಿದರು. ಡಾ| ಮಲ್ಲಿಕಾರ್ಜುನ ಬಿ. ಮಾನ್ವಡೆ ಪ್ರಾಸ್ತಾವಿಕವಾಗಿ ಮಾತನಾಡಿದರು. ಡಾ|ಸಂತೋಷ ನಿರೂಪಿಸಿದರು. ವಿದ್ಯಾರ್ಥಿ ವೀರೇಶ್ ವಂದಿಸಿದರು.

---

ಕರ್ನಾಟಕ ಸರ್ಕಾರ
ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ,
ರಾಷ್ಟ್ರೀಯ ಸೇವಾ ಯೋಜನಾ ಕೋಶ, ಬೆಂಗಳೂರು
ಕನ್ನಡ ವಿಶ್ವವಿದ್ಯಾಲಯ, ಹಂಪಿ, ರಾಷ್ಟ್ರೀಯ ಸೇವಾ ಯೋಜನಾ ಕೋಶ ಹಾಗೂ
ಕರ್ನಾಟಕ ಜಾನಪದ ವಿಶ್ವವಿದ್ಯಾಲಯ, ಗೊಟಗೋಡಿ
ಇವರ ಸಂಯುಕ್ತಾಶ್ರಯದಲ್ಲಿ

## ಡಾ. ಬಿ.ಆರ್. ಅಂಬೇಡ್ಕರ್ ಪ್ರಚಾರ ಅಭಿಯಾನ
## 'ಸಂವಿಧಾನ ಓದು' ಕಾರ್ಯಾಗಾರ

ಅಧ್ಯಕ್ಷತೆ
**ಪ್ರೊ. ಡಿ.ವಿ. ಪರಮಶಿವಮೂರ್ತಿ**
ಮಾನ್ಯ ಕುಲಪತಿಗಳು, ಕನ್ನಡ ವಿಶ್ವವಿದ್ಯಾಲಯ, ಹಂಪಿ

ಉದ್ಘಾಟಕರು
**ಪ್ರೊ. ಟಿ.ಎಂ. ಭಾಸ್ಕರ್**
ಮಾನ್ಯ ಕುಲಪತಿಗಳು, ಕರ್ನಾಟಕ ಜಾನಪದ ವಿಶ್ವವಿದ್ಯಾಲಯ, ಗೊಟಗೋಡಿ

ಸಂಪನ್ಮೂಲ ವ್ಯಕ್ತಿಗಳು
**ಪ್ರೊ. ಸಿ. ಶರಣಪ್ಪ**
ವಿಶ್ರಾಂತ ಪ್ರಾಚಾರ್ಯರು ಹಾಗೂ ರಾಜಕೀಯ ಚಿಂತಕರು, ಅಂಗಸೂಗೂರು

ವಿಷಯ
**ಭಾರತ ಸಂವಿಧಾನದ ಆಶಯಗಳು**

ಅತಿಥಿಗಳು
**ಪ್ರೊ. ಸಿ.ಟಿ. ಗುರುಪ್ರಸಾದ್**
ಕುಲಸಚಿವರು, ಕರ್ನಾಟಕ ಜಾನಪದ ವಿಶ್ವವಿದ್ಯಾಲಯ, ಗೊಟಗೋಡಿ

ದಿನಾಂಕ : ೧೨.೦೪.೨೦೨೩, ಬೆಳಗ್ಗೆ ೧೦:೩೦ಕ್ಕೆ
ಸ್ಥಳ : ಮಂಟಪ ಸಭಾಂಗಣ

**ಸರ್ವರಿಗೂ ಆದರದ ಸ್ವಾಗತ**

**ಪ್ರೊ. ಎ. ಸುಬ್ಬಣ್ಣ ರೈ**
ಕುಲಸಚಿವರು
ಕನ್ನಡ ವಿಶ್ವವಿದ್ಯಾಲಯ, ಹಂಪಿ

**ಡಾ. ಅಮರೇಶ ಯತಗಲ್**
ಸಂಯೋಜನಾಧಿಕಾರಿ
ರಾಷ್ಟ್ರೀಯ ಸೇವಾ ಯೋಜನಾ ಕೋಶ, ಕ.ವಿ.ಹಂ.

**ಡಾ. ಮಲ್ಲಿಕಾರ್ಜುನ ಬಿ. ಮಾನ್ವಡೆ**
ರಾಜ್ಯ ನೋಡಲ್ ಅಧಿಕಾರಿ, ಸಂವಿಧಾನ ಓದು ಕಾರ್ಯಕ್ರಮ
ಸಂ.ಎನ್.ಎಸ್.ಎಸ್.ಕ.ಜಾ.ವಿ., ಗೊಟಗೋಡಿ